ಕರ್ನಾಟಕ ಸರ್ಕಾರ
**ಪಂಚಾಯತ್ ರಾಜ್ ಆಯುಕ್ತಾಲಯ**
**ಕಾಳಿದಾಸ ರಸ್ತೆ, ಗಾಂಧಿನಗರ ಬೆಂಗಳೂರು – 560 009.**

---

ಸಂಖ್ಯೆ: ಕಪಂರಾಆ/ಅಭಿವೃದ್ಧಿ/453/2024 ದಿನಾಂಕ: 10.06.2024

c.no: 1420586

**ಸುತ್ತೋಲೆ**

**ವಿಷಯ:** ಕೂಸಿನ ಮನೆ ಶಿಶುಪಾಲನಾ ಕೇಂದ್ರಗಳನ್ನು ಬಲಪಡಿಸಲು ಕೈಗೊಳ್ಳಬೇಕಾದ ಕ್ರಮಗಳ ಕುರಿತು.

**ಉಲ್ಲೇಖ: 1.** ಜಂಟಿ ಸುತ್ತೋಲೆ ಸಂ:ಕಪಂಆ/ಅಭಿವೃದ್ಧಿ/343(ಭಾಗ-2)/2023 ದಿನಾಂಕ:14.09.2023

**2.** ದಿನಾಂಕ: 03.04.2024 ರಂದು ಮಾನ್ಯ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ಚರ್ಚಿಸಿ ತೀರ್ಮಾನಿಸಿದಂತೆ

********

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ನರೇಗಾ ಯೋಜನೆಯನ್ನು ಅತ್ಯುತ್ತಮವಾಗಿ ಅನುಷ್ಠಾನಗೊಳಿಸುತ್ತಿರುವ 4000 ಗ್ರಾಮ ಪಂಚಾಯಿತಿಗಳಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಸಹಯೋಗದೊಂದಿಗೆ ನರೇಗಾ ಕ್ರಿಯಾಶೀಲ ಉದ್ಯೋಗ ಕಾರ್ಡ್ ಹೊಂದಿರುವ ಕುಟುಂಬದ 3 ವರ್ಷದೊಳಗಿನ ಮಕ್ಕಳಿಗೆ ಶಿಶುಪಾಲನಾ ಕೇಂದ್ರಗಳನ್ನು **"ಕೂಸಿನ ಮನೆ"** ಎಂಬ ಹೆಸರಿನಲ್ಲಿ ಪ್ರಾರಂಭಿಸಲಾಗಿದೆ.

ಇದರಿಂದ, ಗ್ರಾಮೀಣ ಪ್ರದೇಶದಲ್ಲಿ ನರೇಗಾ ಯೋಜನೆಯಡಿಯಲ್ಲಿ ಮಹಿಳೆಯರಿಗೆ ಹೆಚ್ಚಿನ ಉದ್ಯೋಗಾವಕಾಶಗಳನ್ನು ಕಲ್ಪಿಸಲು ಸಾಧ್ಯವಾಗುತ್ತದೆ. ದುಡಿಯುವ ಮಹಿಳೆಯರು ನೆಮ್ಮದಿಯಿಂದ ಕೆಲಸ ಮಾಡಲು ಮತ್ತು ಅವರ ಮಕ್ಕಳಿಗೆ ಸುರಕ್ಷತೆ, ಪೂರಕ ಪೌಷ್ಠಿಕ ಆಹಾರ ಸೌಲಭ್ಯ ಒದಗಿಸಲು ಸಹಕಾರಿಯಾಗುವಂತೆ ರಾಜ್ಯದಲ್ಲಿ 4000 ಕೂಸಿನ ಮನೆ ಶಿಶುಪಾಲನಾ ಕೇಂದ್ರಗಳನ್ನು ನರೇಗಾ ಯೋಜನೆಯಡಿ ಅತೀ ಹೆಚ್ಚು ಮಾನವ ದಿನಗಳನ್ನು ಸೃಜಿಸಿರುವ ಗ್ರಾಮ ಪಂಚಾಯಿತಿಗಳಲ್ಲಿ ಪ್ರಾರಂಭಿಸಲಾಗಿದೆ. " ಕೂಸಿನ ಮನೆ "ಶಿಶುಪಾಲನಾ ಕೇಂದ್ರಗಳನ್ನು ಸ್ಥಾಪಿಸಲು ಹಾಗೂ ನಿರ್ವಹಣೆ ಮಾಡಲು ಸೂಕ್ತ ಮಾರ್ಗಸೂಚಿಗಳೊಂದಿಗೆ ಉಲ್ಲೇಖಿ (1)ರ ಜಂಟಿ ಸುತ್ತೋಲೆಯಲ್ಲಿ ಹೊರಡಿಸಲಾಗಿದೆ.

ಉಲ್ಲೇಖ (2) ರಲ್ಲಿ ಸಭೆಯಲ್ಲಿ ಚರ್ಚಿಸಿ ತೀರ್ಮಾನಿಸಿದಂತೆ ಈ ಕೆಳಕಂಡ ಅಂಶಗಳ ಕುರಿತು ಅಗತ್ಯ ಕ್ರಮ ಕೈಗೊಳ್ಳುವಂತೆ ತಿಳಿಸಿದೆ.

**ಕೈಗೊಳ್ಳಬೇಕಾದ ಕ್ರಮಗಳು:**

1. ಕೂಸಿನ ಮನೆ ಕೇಂದ್ರಗಳ ಕೇರ್ ಟೇಕರ್ಸ್ ಗಳಿಗೆ ಪುನರ್ ಮನನ ತರಬೇತಿ ನೀಡಲು ಅವಶ್ಯವಿರುವ ತರಬೇತಿ ವೆಚ್ಚವನ್ನು ಗ್ರಾಮ ಪಂಚಾಯಿತಿ ವತಿಯಿಂದ ಭರಿಸುವುದು.
2. ಪ್ರಾರಂಭಗೊಂಡಿರುವ ಕೂಸಿನ ಮನೆ ಶಿಶುಪಾಲನಾ ಕೇಂದ್ರಗಳಿಗೆ ಪೌಷ್ಠಿಕ ಆಹಾರ ಮೆನು ಸಿದ್ದಪಡಿಸಿ ಅದರಂತೆ ಆಹಾರ ಸಾಮಗ್ರಿಗಳನ್ನು ಕಡ್ಡಾಯವಾಗಿ ನೀಡುವುದು.

3. ಕೂಸಿನ ಮನೆ ಶಿಶುಪಾಲನಾ ಕೇಂದ್ರಗಳಲ್ಲಿ ಆಹಾರ ತಯಾರಿಕೆಗೆ ಗ್ಯಾಸ್/ ವಿದ್ಯುಚ್ಛಕ್ತಿ/ ಸೋಲಾರ್ ಬಳಕೆ ಮಾಡುವುದು.
4. ವಿದ್ಯುಚ್ಛಕ್ತಿ ಸಂಪರ್ಕವಿಲ್ಲದಿದ್ದಲ್ಲಿ ಗ್ರಾಮ ಪಂಚಾಯಿತಿ ಆರೋಗ್ಯ ಉಪಕರ ಬಳಸಿ ಸಂಪರ್ಕ ಕಲ್ಪಿಸುವುದು.
5. ಅಗತ್ಯವಾದಾಗ ಹತ್ತಿರವಿರುವ/ಪಕ್ಕದಲ್ಲಿರುವ ಬಿಸಿ ಊಟ ಅಡಿಗೆ ಮನೆ/ಅಂಗನವಾಡಿ ಕೇಂದ್ರದ ಅಡುಗೆ ಮನೆಯನ್ನು ಬಳಸಿಕೊಳ್ಳುವುದು.
6. ಕೂಸಿನ ಮನೆ ಶಿಶುಪಾಲನಾ ಕೇಂದ್ರಗಳಿಗೆ ಭೇಟಿ ನೀಡುವ ಸಂಬಂಧಪಟ್ಟ ನೋಡಲ್ ಅಧಿಕಾರಿಗಳು ಪಂಚತಂತ್ರ-2 ತಂತ್ರಾಂಶದಲ್ಲಿ ಮಾಹಿತಿ ದಾಖಲಿಸುವುದು.
7. ಕೂಸಿನ ಮನೆಯಲ್ಲಿ ಪ್ರತಿ ತಿಂಗಳು ಪೋಷಕರ ಸಭೆ ಕರೆದು ಮಕ್ಕಳ ಭೌತಿಕ ಮತ್ತು ಬೌದ್ಧಿಕ ಬೆಳವಣಿಗೆಗಳ ಬಗ್ಗೆ ಸಂಭ್ರಮಿಸಲು ಅವಕಾಶ ಕಲ್ಪಿಸುವುದು.

ಆಯುಕ್ತರು
ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯ
ಬೆಂಗಳೂರು

**ಪ್ರತಿಯನ್ನು ಅಗತ್ಯ ಕ್ರಮಕ್ಕಾಗಿ:**

1. ಆಯುಕ್ತರು, ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ , ಬೆಂಗಳೂರು.
2. ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಬೆಂಗಳೂರು.
3. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ.
4. ರಾಜ್ಯದ ಎಲ್ಲಾ ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ (ಸಂಬಂಧಿಸಿದ ಜಿಲ್ಲಾ ಪಂಚಾಯಿತಿ ಮುಖ್ಯಕಾರ್ಯನಿರ್ವಾಹಕ ಅಧಿಕಾರಿಗಳ ಮುಖಾಂತರ)
5. ರಾಜ್ಯದ ಎಲ್ಲಾ ಗ್ರಾಮ ಪಂಚಾಯಿತಿ, ಪಂಚಾಯಿತಿ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳಿಗೆ. (ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿಗಳ ಮುಖಾಂತರ)

**ಪ್ರತಿಯನ್ನು ಮಾಹಿತಿಗಾಗಿ:**

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ(ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು ಇವರ ಆಪ್ತ ಸಹಾಯಕರಿಗೆ.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು ಇವರ ಆಪ್ತ ಸಹಾಯಕರಿಗೆ.
3. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಬೆಂಗಳೂರು ಇವರ ಆಪ್ತ ಸಹಾಯಕರಿಗೆ.
4. ಅಭಿಯಾನ ನಿರ್ದೇಶಕರು, ರಾಷ್ಟ್ರೀಯ ಆರೋಗ್ಯ ಅಭಿಯಾನ (NHM) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ.

5. ಆಯುಕ್ತರು, ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯ, ಬೆಂಗಳೂರು ಇವರ ಆಪ್ತ ಸಹಾಯಕರು.
6. ನಿರ್ದೇಶಕರು(ಅಭಿವೃದ್ಧಿ), ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯ, ಇವರ ಆಪ್ತ ಶಾಖೆಗೆ
7. ಕಛೇರಿ ಪ್ರತಿ.